ಮೇಲೆ ಹಾಗೂ ಬೇರೆ ಇಲಾಖೆಗಳಲ್ಲಿ ಹೆಚ್ಚುವರಿ ಹುದ್ದೆಗಳೆಂದು ಗುರುತಿಸಲ್ಪಟ್ಟಿರುವ ಸಂಖ್ಯಾರಿಕ್ತ ಹುದ್ದೆಗಳನ್ನು ಮರು ವಿನ್ಯಾಸಗೊಳಿಸುವ ಮೂಲಕ ತುಂಬಲಾಗುತ್ತಿದೆ.

(ಈ) ಸಕಲೇಶಪುರ ಕ್ಷೇತ್ರದಲ್ಲಿ ಮೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿದ್ದು, (ಸಕಲೇಶಪುರ, ಆಲೂರು ಮತ್ತು ಹೆತ್ತೂರು) ಇವುಗಳಲ್ಲಿ ಒಟ್ಟು 17 ಉಪನ್ಯಾಸಕರು, 03 ಗ್ರಂಥಪಾಲಕರು, 03 ದೈಹಿಕ ಶಿಕ್ಷಣ ಬೋಧಕರು, 02 ಅಧೀಕ್ಷಕರು, 03 ಪ್ರಥಮ ದರ್ಜೆ ಸಹಾಯಕರು, 03 ಬೆರಳಚ್ಚುಗಾರರು 02 ಅಟೆಂಡರ್ ಹಾಗೂ 07 ಪರಿಚಾರಕರ ಹುದ್ದೆಗಳು ಖಾಲಿ ಇರುತ್ತವೆ. ಕರ್ನಾಟಕ ಲೋಕ ಸೇವಾ ಆಯೋಗದಿಂದ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಕುರಿತಂತೆ ಅಭ್ಯರ್ಥಿಗಳ ಆಯ್ಕೆ ಪಟ್ಟಿಗಳನ್ನು ಸ್ವೀಕರಿಸಿದ ನಂತರ ಉಲ್ಲೇಖಿತ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು.

**53 (42) ಶ್ರೀ ಹೆಚ್.ಕೆ. ಕುಮಾರಸ್ವಾಮಿ** :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರು ಮತ್ತು ಇತರೆ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ನೇಮಕಾತಿಗೆ ಕೈಗೊಂಡ ಕ್ರಮಗಳೇನು;

(ಇ) ಸಕಲೇಶಪುರ ಕ್ಷೇತ್ರದಲ್ಲಿ ಖಾಲಿ ಇರುವ ಶೇಕಡ 50 ಕ್ಕೂ ಹೆಚ್ಚು ಉಪನ್ಯಾಸಕರು ಮತ್ತು ಶಿಕ್ಷಕೇತರ ಸಿಬ್ಬಂದಿಗಳನ್ನು ಯಾವಾಗ ನೇಮಕ ಮಾಡಿಕೊಳ್ಳಲಾಗುವುದು?

**ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)**:–

(ಅ) ಬಂದಿದೆ.

(ಆ) 2450 ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿಯಿಂದ ತುಂಬಲು ಕರ್ನಾಟಕ ಲೋಕ ಸೇವಾ ಆಯೋಗವನ್ನು ಕೋರಲಾಗಿದ್ದು, ಆಯೋಗವು ದಿನಾಂಕ: 02–04–2008 ರಂದು ಅಧಿಸೂಚನೆ ಹೊರಡಿಸಿ ಆಯ್ಕೆ ಪ್ರಕ್ರಿಯೆಗೆ ಚಾಲನೆ ನೀಡಿದೆ.

* 1246 ಉಪನ್ಯಾಸಕರ ಹುದ್ದೆಗಳಿಗೆ ಸ್ನಾತಕೋತ್ತರ ಪದವಿ ಪಡೆದ ಪ್ರೌಢ ಶಾಲಾ ಸಹ ಶಿಕ್ಷಕರ ಹುದ್ದೆಯಿಂದ ಬಡ್ತಿ ಮೂಲಕ ತುಂಬಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

* ನೇರ ನೇಮಕಾತಿಯಿಂದ ತುಂಬಬೇಕಾದ 100 ದ್ವಿ.ದ.ಸ ಮತ್ತು 58 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳಿಗೆ ಕರ್ನಾಟಕ ಲೋಕ ಸೇವಾ ಆಯೋಗವು ದಿನಾಂಕ: 10–01–2008 ರಲ್ಲಿ ಅಧಿಸೂಚನೆ ಹೊರಡಿಸಿ, ಪರೀಕ್ಷೆಗಳನ್ನು ನಡೆಸಿ, ಆಯ್ಕೆ ಪ್ರಕ್ರಿಯೆ ನಡೆಸುತ್ತಿದೆ.

(ಇ) 2450 ಉಪನ್ಯಾಸಕರ ಹುದ್ದೆಗಳಿಗೆ ಕರ್ನಾಟಕ ಲೋಕ ಸೇವಾ ಆಯೋಗದಿಂದ ಅಂತಿಮ ಆಯ್ಕೆ ಪಟ್ಟಿ ಬಂದ ತಕ್ಷಣವೇ ಕೌನ್ಸಿಲಿಂಗ್ ಮೂಲಕ ನೇಮಕ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ 1246 ಉಪನ್ಯಾಸಕರ ಹುದ್ದೆಗಳಿಗೆ ಬಡ್ತಿ ನೀಡುವ ಪ್ರಕ್ರಿಯೆ ಪೂರ್ಣಗೊಂಡ ನಂತರ ಕೌನ್ಸಿಲಿಂಗ್ ಮೂಲಕ ನೇಮಕ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

ಬೋಧಕೇತರ ಸಿಬ್ಬಂದಿ ನೇಮಕಾತಿಗೆ ಸಂಬಂಧಪಟ್ಟಂತೆ ಕರ್ನಾಟಕ ಲೋಕ ಸೇವಾ ಆಯೋಗದಿಂದ ಅಂತಿಮ ಆಯ್ಕೆ ಪಟ್ಟಿಯನ್ನು ಪಡೆದ ನಂತರ ನೇಮಕ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

**54 (152) ಶ್ರೀ ನಾಯ್ಕ ಜೆ.ಡಿ.** :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಭಟ್ಕಳ ವಿಧಾನ–ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈ ಹಿಂದಿನ ಸರ್ಕಾರ ಎಷ್ಟು ಪದವಿ ಕಾಲೇಜುಗಳನ್ನು ಮಂಜೂರು ಮಾಡಿದೆ;

(ಆ) ಈ ಕಾಲೇಜಿಗೆ ಮಂಜೂರು ಮಾಡಿದ ಉಪನ್ಯಾಸಕರು ಹಾಗೂ ಸಿಬ್ಬಂದಿ ಸಂಖ್ಯೆ ಎಷ್ಟು;

(ಇ) ಎಷ್ಟು ಸಿಬ್ಬಂದಿ ಹಾಗೂ ಉಪನ್ಯಾಸಕರ ಹುದ್ದೆ ಖಾಲಿ ಇದೆ;

(ಈ) ಸಿಬ್ಬಂದಿ ಹಾಗೂ ಉಪನ್ಯಾಸಕರ ಖಾಲಿ ಹುದ್ದೆಯಿಂದ ಮಕ್ಕಳ ಶಿಕ್ಷಣದ ಮೇಲೆ ಪರಿಣಾಮ ಬೀರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಈ ಕಾಲೇಜಿಗೆ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಈ ಕಾಲೇಜಿಗೆ ಎಂದಿನಿಂದ ಹೊಸ ಕಟ್ಟಡ ನಿರ್ಮಿಸಲಾಗುವುದು?

**ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು)** :–

(ಅ) 01;

(ಆ) ಪ್ರಾಂಶುಪಾಲರು; 01

ಉಪನ್ಯಾಸಕರು 12

ದೈಹಿಕ ಶಿಕ್ಷಣ ಬೋಧಕರು 01

ಗ್ರಂಥಪಾಲಕರು 01